**All India Radio: Bangalore**
**National Bulletin In Kannada**
**10.12.2025  1.10 p.m.**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**10.12.2025  1.10 p.m.**

**<><><><>**

ಮುಖ್ಯಾಂಶಗಳು

1. ಮಾನವ ಹಕ್ಕುಗಳ ರಕ್ಷಣೆಗೆ ಭಾರತ ಬದ್ಧ- ರಾಷ್ಟ್ರಪತಿ ದ್ರೌಪದಿ ಮುರ್ಮು
2. ಅಮೃತ್ ಭಾರತ್ ಯೋಜನೆಯಡಿ ದೇಶದ ಒಂದು ಸಾವಿರದ ೩೦೦ಕ್ಕೂ ಹೆಚ್ಚು ರೈಲು ನಿಲ್ದಾಣಗಳ ಅಭಿವೃದ್ಧಿ- ರೈಲ್ವೆ ಸಚಿವ ಅಶ್ವಿನಿ ವೈಷ್ಣವ್
3. ಯುನೆಸ್ಕೋ ಪಾರಂಪರಿಕ ಪಟ್ಟಿಗೆ ದೀಪಾವಳಿ ಸೇರ್ಪಡೆ
4. ಭಾರತ-ಅಮೆರಿಕ ಸಮಗ್ರ ಜಾಗತಿಕ ಕಾರ್ಯತಂತ್ರ ಪಾಲುದಾರಿಕೆ ಕುರಿತು ಚರ್ಚೆ

<><><><>

ಮಾನವ ಹಕ್ಕುಗಳನ್ನು ರಕ್ಷಿಸುವುದಲ್ಲದೆ, ಆಚರಿಸುವ ರಾಷ್ಟ್ರವಾಗಿರಲು ಭಾರತ ಬದ್ಧವಾಗಿದೆ ಎಂದು ರಾಷ್ಟ್ರಪತಿ ದ್ರೌಪದಿ ಮುರ್ಮು ಹೇಳಿದ್ದಾರೆ. ನವದೆಹಲಿಯಲ್ಲಿ ಇಂದು ೨೦೨೫ ರ ಮಾನವ ಹಕ್ಕುಗಳ ದಿನ ಮತ್ತು ದೈನಂದಿನ ಅಗತ್ಯಗಳನ್ನು ಖಚಿತಪಡಿಸುವ ಕುರಿತ ರಾಷ್ಟ್ರೀಯ ಸಮ್ಮೇಳನವನ್ನು ಉದ್ದೇಶಿಸಿ ಮಾತನಾಡಿದ ರಾಷ್ಟ್ರಪತಿ, ಘನತೆ ಎಂಬ ವಿಷಯದಲ್ಲಿ ರಾಜಿಯಾಗಲು ಸಾಧ್ಯವಿಲ್ಲ. ಯಾರೂ ಅವರ ಹಕ್ಕುಗಳಿಂದ ವಂಚಿತರಾಗಬಾರದು ಎಂದು ಒತ್ತಿ ಹೇಳಿದರು. ಮಾನವ ಹಕ್ಕುಗಳ ದಿನ, ನ್ಯಾಯಯುತ, ಸಮಾನ ಮತ್ತು ಸಹಾನುಭೂತಿಯ ಸಮಾಜದ ಅಡಿಪಾಯವಾಗಿದೆ. ಭಾರತದ ಪ್ರತಿಯೊಬ್ಬ ವ್ಯಕ್ತಿಯ ಜನ್ಮಸಿದ್ಧ ಹಕ್ಕಾಗಿ ನ್ಯಾಯ ಉಳಿಯಬೇಕು ಎಂದು ತಿಳಿಸಿದರು.

**ಧ್ವನಿ: ರಾಷ್ಟ್ರಪತಿ ( ೨೨ ಸೆಕೆಂಡ್ಸ್)**

<><><><>

ಮುಂಬರುವ ದಶಕದಲ್ಲಿ ಪ್ರತಿಯೊಬ್ಬ ನಾಗರಿಕನು ಸಮರ್ಥ ಸಂಸ್ಥೆಗಳು ಮತ್ತು ಸಹಾನುಭೂತಿಯ ಆಡಳಿತದ ಮೂಲಕ ಘನತೆಯನ್ನು ಅನುಭವಿಸುವ ರಾಷ್ಟ್ರವಾಗುವುದು ಭಾರತದ ಆಶಯವಾಗಿದೆ ಎಂದು ಪ್ರಧಾನ ಮಂತ್ರಿಯವರ ಪ್ರಧಾನ ಕಾರ್ಯದರ್ಶಿ ಡಾ.ಪಿ.ಕೆ.ಮಿಶ್ರಾ ಹೇಳಿದ್ದಾರೆ.

ನವದೆಹಲಿಯಲ್ಲಿ ನಡೆದ ೨೦೨೫ ರ ಮಾನವ ಹಕ್ಕುಗಳ ದಿನ ಮತ್ತು ದೈನಂದಿನ ಅಗತ್ಯಗಳನ್ನು ಖಚಿತಪಡಿಸುವ ರಾಷ್ಟ್ರೀಯ ಸಮ್ಮೇಳನವನ್ನು ಉದ್ದೇಶಿಸಿ ಮಾತನಾಡಿದ ಅವರು, ಉತ್ತಮ ಆಡಳಿತವು ಅತ್ಯಗತ್ಯ ಹಕ್ಕು. ಇದರಲ್ಲಿ ಪರಿಣಾಮಕಾರಿ ವ್ಯವಸ್ಥೆ, ಪಾರದರ್ಶಕ ಪ್ರಕ್ರಿಯೆಗಳು ಮತ್ತು ಜನರನ್ನು ಗೌರವ ಮತ್ತು ಸಹಾನುಭೂತಿಯಿಂದ ನಡೆಸಿಕೊಳ್ಳುವ ಸಂಸ್ಥೆಗಳು ಸೇರಿವೆ ಎಂದರು. ೧೯೪೮ ರಲ್ಲಿ ಮಾನವ ಹಕ್ಕುಗಳ ಸಾರ್ವತ್ರಿಕ ಘೋಷಣೆಯು ಜಗತ್ತಿಗೆ ಘನತೆಯ ಹಂಚಿಕೆಯನ್ನು ನೀಡಿತು ಮತ್ತು ಭಾರತವು ಈ ಪ್ರಕ್ರಿಯೆಗೆ ಗಮನಾರ್ಹವಾಗಿ ಕೊಡುಗೆ ನೀಡಿದೆ ಎಂದು ಅವರು ಹೇಳಿದರು. ಘನತೆಯು ದೀರ್ಘಕಾಲದಿಂದ ಗುರುತಿಸಲ್ಪಟ್ಟ ಸ್ವಾತಂತ್ರ್ಯಗಳಿಂದ ಮಾತ್ರವಲ್ಲದೆ ಗೌಪ್ಯತೆ, ಚಲನಶೀಲತೆ, ಸ್ವಚ್ಛ ಪರಿಸರ ಮತ್ತು ಡಿಜಿಟಲ್ ಸೇರ್ಪಡೆಯ ಪ್ರವೇಶದ ಮೂಲಕ ಇಂದು ವ್ಯಾಖ್ಯಾನಿಸಲ್ಪಟ್ಟಿದೆ ಎಂದು ಅವರು ಪ್ರತಿಪಾದಿಸಿದರು. ನಾಗರಿಕ ಕೇಂದ್ರಿತ ಆಡಳಿತವನ್ನು ಆಳಗೊಳಿಸುವುದು, ತಂತ್ರಜ್ಞಾನವನ್ನು ಜವಾಬ್ದಾರಿಯುತವಾಗಿ ಬಳಸುವುದು, ಸಾಂಸ್ಥಿಕ ದೂರದೃಷ್ಟಿಯನ್ನು ಬಲಪಡಿಸುವುದು ಮತ್ತು ಘನತೆಯನ್ನು ಖಚಿತಪಡಿಸಿಕೊಳ್ಳುವುದು ಪ್ರತಿಯೊಂದು ಸಾರ್ವಜನಿಕ ಸೇವೆಯಲ್ಲಿಯೂ ಮುಂದುವರಿಯುವ ಏಕೈಕ ಮಾರ್ಗವಾಗಿದೆ ಎಂದು ಡಾ.ಪಿ.ಕೆ.ಮಿಶ್ರಾ ಅಭಿಪ್ರಾಯಪಟ್ಟಿದ್ದಾರೆ.

<><><><>

ಅಮೃತ್ ಭಾರತ್ ನಿಲ್ದಾಣ ಯೋಜನೆಯಡಿ ೧೬೦ ರೈಲು ನಿಲ್ದಾಣಗಳ ಕಾಮಗಾರಿ ಪೂರ್ಣಗೊಂಡಿದೆ ಎಂದು ಸರ್ಕಾರ ತಿಳಿಸಿದೆ. ಲೋಕಸಭೆಯಲ್ಲಿಂದು ಪ್ರಶ್ನೋತ್ತರ ಅವಧಿಯಲ್ಲಿ ಪೂರಕ ಪ್ರಶ್ನೆಗಳಿಗೆ ಉತ್ತರಿಸಿದ ಕೇಂದ್ರ ರೈಲ್ವೆ ಸಚಿವ ಅಶ್ವಿನಿ ವೈಷ್ಣವ್, ಈ ಯೋಜನೆಯಡಿಯಲ್ಲಿ ಒಂದು ಸಾವಿರದ ೩೦೦ಕ್ಕೂ ಹೆಚ್ಚು ರೈಲು ನಿಲ್ದಾಣಗಳನ್ನು ಅಭಿವೃದ್ಧಿಗಾಗಿ ಗುರುತಿಸಲಾಗಿದೆ ಎಂದು ಹೇಳಿದರು. ಪ್ರಯಾಣಿಕರ ವಿಶ್ರಾಂತಿ ಸ್ಥಳ, ವಾಹನ ನಿಲುಗಡೆ ಮತ್ತು ರೈಲು ನಿಲ್ದಾಣಗಳಿಗೆ ಸುಲಭ ಪ್ರವೇಶವನ್ನು ನಿರ್ಮಿಸುವ ಮೂಲಕ ರೈಲು ನಿಲ್ದಾಣಗಳಲ್ಲಿ ಪ್ರಯಾಣಿಕರ ಸೌಲಭ್ಯಗಳನ್ನು ಸುಧಾರಿಸಲು ಸರ್ಕಾರ ಕ್ರಮ ಕೈಗೊಂಡಿದೆ. ಪ್ರಯಾಣಿಕರ ಸುರಕ್ಷತೆಯ ಮೇಲೆ ಗಮನ ಹರಿಸಿ, ನಿಲ್ದಾಣದ ಪುನರಾಭಿವೃದ್ಧಿ ಕಾರ್ಯವನ್ನು ಕೈಗೊಳ್ಳಲಾಗುತ್ತಿದೆ ಎಂದು ಸಚಿವರು ತಿಳಿಸಿದ್ದಾರೆ.

ಧ್ವನಿ: ಅಶ್ವಿನಿ ವೈಷ್ಣವ್ ( ೨೨ ಸೆಕೆಂಡ್ಸ್)

<><><><>

ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಕೇಂದ್ರ ಸರ್ಕಾರದ ಅಡಿಯಲ್ಲಿ ಚುನಾವಣಾ ಆಯೋಗ ಸೇರಿದಂತೆ ಎಲ್ಲಾ ಸಾಂವಿಧಾನಿಕ ಸಂಸ್ಥೆಗಳು ಹೆಚ್ಚು ಪಾರದರ್ಶಕವಾಗುತ್ತಿವೆ ಎಂದು ಕೇಂದ್ರ ಇಂಧನ ಸಚಿವ ಮನೋಹರ್‌ಲಾಲ್ ಹೇಳಿದ್ದಾರೆ. ಚುನಾವಣಾ ಆಯೋಗ ಮತ್ತು ಮತದಾರರ ಪಟ್ಟಿಯ ತೀವ್ರ ಪರಿಷ್ಕರಣೆ ಕುರಿತು ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಅವರ ಹೇಳಿಕೆಯನ್ನು ಟೀಕಿಸಿರುವ ಅವರು, ಕಾಂಗ್ರೆಸ್ ಆಡಳಿತಕ್ಕಿಂತ ಭಿನ್ನವಾಗಿ ಸಾಂವಿಧಾನಿಕ ಸಂಸ್ಥೆಗಳಲ್ಲಿ ಮೊದಲ ಬಾರಿಗೆ ಪಾರದರ್ಶಕತೆಯನ್ನು ಕಾಯ್ದುಕೊಳ್ಳಲಾಗುತ್ತಿದೆ ಎಂದರು. ಇದೇ ವೇಳೆ, ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ ಪ್ರತಿಕ್ರಿಯಿಸಿ, ಚುನಾವಣಾ ಆಯೋಗದ ವಿರುದ್ಧ ಕಾಂಗ್ರೆಸ್ ನಾಯಕರು ಸುಳ್ಳು ಆರೋಪಗಳನ್ನು ಮಾಡುತ್ತಿದ್ದಾರೆ. ಚುನಾವಣೆಗಳಲ್ಲಿ ಸೋತಾಗಲೆಲ್ಲಾ ಕಾಂಗ್ರೆಸ್ ನಾಯಕರು, ಇ.ವಿ.ಎಂ ಮತ್ತು ಮತಗಳ ವಂಚನೆ ವಿಷಯವನ್ನು ಎತ್ತುತ್ತಾರೆ ಎಂದು ಆರೋಪಿಸಿದರು.

<><><><>

ಭಾರತದ ಪ್ರಮುಖ ಸಾಂಸ್ಕೃತಿಕ ಮತ್ತು ಆಧ್ಯಾತ್ಮಿಕ ಹಬ್ಬಗಳಲ್ಲಿ ಒಂದಾದ ದೀಪಾವಳಿಯನ್ನು ಇಂದು ವಿಶ್ವಸಂಸ್ಥೆಯ ಶೈಕ್ಷಣಿಕ, ವೈಜ್ಞಾನಿಕ ಮತ್ತು ಸಾಂಸ್ಕೃತಿಕ ಸಂಸ್ಥೆ- ಯುನೆಸ್ಕೊ ಪಾರಂಪರಿಕ ಪಟ್ಟಿಯಲ್ಲಿ ಸೇರಿಸಲಾಗಿದೆ. ಈ ಕುರಿತು ಮಾಹಿತಿ ನೀಡಿದ ಕೇಂದ್ರ ಸಂಸ್ಕೃತಿ ಮತ್ತು ಪ್ರವಾಸೋದ್ಯಮ ಸಚಿವ ಗಜೇಂದ್ರ ಸಿಂಗ್ ಶೇಖಾವತ್, ಇದು ಪ್ರತಿಯೊಬ್ಬ ಭಾರತೀಯನ ಭಾವನಾತ್ಮಕ ಕ್ಷಣವಾಗಿದೆ. ದೀಪಾವಳಿಯನ್ನು ಕೇವಲ ಆಚರಿಸುವುದಲ್ಲ, ಬದಲಾಗಿ ಅದನ್ನು ಅನುಭವಿಸಲಾಗುತ್ತದೆ, ಬದುಕಲಾಗುತ್ತದೆ ಮತ್ತು ಪೀಳಿಗೆಯಿಂದ ಪೀಳಿಗೆಗೆ ವರ್ಗಾಹಿಸಲಾಗುತ್ತದೆ ಎಂದು ಹೇಳಿದ್ದಾರೆ. ಈ ಮನ್ನಣೆಯು ಕೇವಲ ಗೌರವವಲ್ಲ, ಆದರೆ ದೀಪಾವಳಿ ಜೀವಂತ ಪರಂಪರೆಯಾಗಿ ಉಳಿಯುವಂತೆ ನೋಡಿಕೊಳ್ಳುವ ಜವಾಬ್ದಾರಿಯಾಗಿದೆ ಎಂದು ಸಚಿವರು ತಿಳಿಸಿದ್ದಾರೆ.

<><><><>

ವಿದೇಶಾಂಗ ಕಾರ್ಯದರ್ಶಿ ವಿಕ್ರಮ್ ಮಿಸ್ರಿ ಮತ್ತು ಅಮೆರಿಕ ವಿದೇಶಾಂಗ ಕಾರ್ಯದರ್ಶಿ ಆಲಿಸನ್ ಹೂಕರ್ ಅವರ ಸಹ ಅಧ್ಯಕ್ಷತೆಯಲ್ಲಿ ಭಾರತ-ಅಮೆರಿಕ ವಿದೇಶಾಂಗ ಕಚೇರಿ ಸಮಾಲೋಚನಾ ಸಭೆ ನಡೆಯಿತು. ಈ ವೇಳೆ, ಭಾರತ-ಅಮೆರಿಕ ಸಮಗ್ರ ಜಾಗತಿಕ ಕಾರ್ಯತಂತ್ರದ ಪಾಲುದಾರಿಕೆ ಕುರಿತು ಚರ್ಚೆ ನಡೆಸಲಾಯಿತು. ವ್ಯಾಪಾರ ಮತ್ತು ಹೂಡಿಕೆ, ರಕ್ಷಣಾ ಸಹಕಾರ, ಇಂಧನ ಸಹಕಾರ, ತಂತ್ರಜ್ಞಾನ, ಖನಿಜಗಳು ಮತ್ತು ವಿಶ್ವಾಸಾರ್ಹ ಪೂರೈಕೆ

ಸರಪಳಿಗಳು ಸೇರಿದಂತೆ ಪ್ರಮುಖ ವಿಷಯಗಳ ಕುರಿತು ದ್ವಿಪಕ್ಷೀಯ ಮಾತುಕತೆ ನಡೆಸಲಾಯಿತು. ಅಲ್ಲದೆ, ಈ ವೇಳೆ, ಆಸಕ್ತಿಯ ಪ್ರಾದೇಶಿಕ ಮತ್ತು ಜಾಗತಿಕ ವಿಷಯಗಳ ಕುರಿತು ಚರ್ಚೆ ನಡೆಯಿತು. ಮುಕ್ತ ಇಂಡೋ ಪೆಸಿಫಿಕ್‌ಗಾಗಿ ಎರಡೂ ಕಡೆಯವರು ತಮ್ಮ ಹಂಚಿಕೆಯ ಬದ್ಧತೆಯನ್ನು ಪುನರುಚ್ಚರಿಸಿದರು. ೨೧ನೇ ಶತಮಾನಕ್ಕೆ ಮಿಲಿಟರಿ ಪಾಲುದಾರಿಕೆ, ವೇಗವರ್ಧಿತ ವಾಣಿಜ್ಯ ಮತ್ತು ತಂತ್ರಜ್ಞಾನದ ಅನುಷ್ಠಾನಕ್ಕೆ ವೇಗವನ್ನು ನೀಡಲು ಉಭಯ ಕಡೆಯವರು ಪರಸ್ಪರ ಒಪ್ಪಿಕೊಂಡರು.

<><><>

ಇಟಲಿ ಉಪಪ್ರಧಾನಿ ಹಾಗೂ ವಿದೇಶಾಂಗ ವ್ಯವಹಾರ ಮತ್ತು ಅಂತಾರಾಷ್ಟ್ರೀಯ ಸಹಕಾರ ಸಚಿವ ಆಂಟೆನಿಯೊ ತಜಾನಿ ಇಂದು ನವದೆಹಲಿಗೆ ಆಗಮಿಸಿದ್ದಾರೆ. ಭಾರತಕ್ಕೆ ಇದು ಅವರ ಎಡನೇ ಭೇಟಿಯಾಗಿದೆ. ದೆಹಲಿ ಮತ್ತು ಮುಂಬೈನಲ್ಲಿ ನಡೆಯಲಿರುವ ಕಾರ್ಯಕ್ರಮದಲ್ಲಿ ಅವರು ಭಾಗವಹಿಸಿದ್ದಾರೆ. ತಜಾನಿ ಅವರ ಈ ಭೇಟಿಯು, ಭಾರತ-ಇಟಲಿ ಕಾರ್ಯತಂತ್ರದ ಸಹಭಾಗಿತ್ವವನ್ನು ಮತ್ತಷ್ಟು ಬಲಪಡಿಸಲಿದೆ. ಇಂದು ಅವರು, ವಿದೇಶಾಂಗ ಸಚಿವ ಡಾ.ಎಸ್.ಜೈಶಂಕರ್ ಅವರನ್ನು ಭೇಟಿಯಾಗಿ ಮಾತುಕತೆ ನಡೆಸಲಿದ್ದಾರೆ ಎಂದು ವಿದೇಶಾಂಗ ಸಚಿವಾಲಯ ತಿಳಿಸಿದೆ.

<><><>

ಇಂದು ಭಾರತದ ಕೊನೆಯ ಗವರ್ನರ್ ಜನರಲ್ ಸಿ.ರಾಜಗೋಪಾಲಾಚಾರಿ ಅವರ ಜನ್ಮ ವಾರ್ಷಿಕೋತ್ಸವ. ಈ ಹಿನ್ನೆಲೆಯಲ್ಲಿ ಅವರಿಗೆ ಉಪರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್ ಗೌರವ ನಮನ ಸಲ್ಲಿಸಿದರು. ಸಿ.ರಾಜಗೋಪಾಲಾಚಾರಿಯವರು ಅಸಾಧಾರಣ ಬುದ್ಧಿವಂತಿಕೆಯ ರಾಜನೀತಿಜ್ಞ, ಸ್ವಾತಂತ್ರ ಹೋರಾಟಗಾರ ಮತ್ತು ದಾರ್ಶನಿಕರಾಗಿದ್ದರು. ಅವರು ತಮ್ಮ ಸ್ಪಷ್ಟ ಚಿಂತನೆ ಮತ್ತು ಪ್ರಜಾಪ್ರಭುತ್ವ ಮೌಲ್ಯಗಳಿಗೆ ಅಚಲ ಬದ್ಧತೆಯಿಂದ ಭಾರತದ ಸಾರ್ವಜನಿಕ ಜೀವನವನ್ನು ರೂಪಿಸಿದ್ದರು. ಅವರ ಜೀವನ ಮತ್ತು ಪರಂಪರೆಯು ಸಮಗ್ರತೆ ಮತ್ತು ರಾಷ್ಟ್ರ ಸೇವೆಗಾಗಿ ಶ್ರಮಿಸಿದ ಎಲ್ಲರಿಗೂ ಮಾರ್ಗದರ್ಶಕವಾಗಿದೆ ಎಂದು ಸಾಮಾಜಿಕ ಜಾಲತಾಣದಲ್ಲಿ ಉಪರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್ ತಿಳಿಸಿದ್ದಾರೆ.

<><><>

ಸ್ವಹಿದ್ ದಿವಸ್ ಸಂದರ್ಭದಲ್ಲಿ ಅಸ್ಸಾಂ ಚಳವಳಿಯಲ್ಲಿ ಭಾಗವಹಿಸಿದ ಎಲ್ಲರ ಶೌರ್ಯವನ್ನು ಪ್ರಧಾನಿ ನರೇಂದ್ರ ಮೋದಿ ಇಂದು ಸ್ಮರಿಸಿದ್ದಾರೆ. ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ಪ್ರಧಾನಿ, ಈ ಚಳವಳಿಯು ರಾಷ್ಟ್ರದ ಇತಿಹಾಸದಲ್ಲಿ ಯಾವಾಗಲೂ ಪ್ರಮುಖ ಸ್ಥಾನವನ್ನು ಹೊಂದಿರುತ್ತದೆ ಎಂದು ಹೇಳಿದ್ದಾರೆ. ಅಸ್ಸಾಂ ಚಳವಳಿಯಲ್ಲಿ ಭಾಗವಹಿಸಿದವರ ಕನಸುಗಳನ್ನು ನನಸಾಗಿಸುವ, ವಿಶೇಷವಾಗಿ ಅಸ್ಸಾಂ ಸಂಸ್ಕೃತಿಯನ್ನು ಬಲಪಡಿಸುವ ಮತ್ತು ರಾಜ್ಯದ ಸರ್ವತೋಮುಖ ಪ್ರಗತಿಯ ಕನಸುಗಳನ್ನು ನನಸಾಗಿಸುವ ಭಾರತದ ಬದ್ಧತೆಯನ್ನು ಪ್ರಧಾನಿ ನರೇಂದ್ರ ಮೋದಿ ಪುನರುಚ್ಚರಿಸಿದ್ದಾರೆ.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>